# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-5

ವಿಷಯ: 2016-17ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸಿರುವ ಸಂಬಂಧ ಪರಿಷ್ಕೃತ ಆದೇಶ.

ಉಲ್ಲೇಖ: 1. ಈ ಕಛೇರಿಯ ಸಮಸಂಖ್ಯೆಯ ಆದೇಶದ ದಿನಾಂಕ 30-08-2016 (1)
2. ಅಧ್ಯಕ್ಷರು, ಮನ:ಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, ಇವರ ಪತ್ರ ಸಂಖ್ಯೆ: ಎಂಎಸ್ಎಸ್/268/2016-17 ದಿನಾಂಕ 21-09-2016.

***

## ಆದೇಶ ಸಂಖ್ಯೆ: ಇಟಿ7/202/2011-12 ದಿನಾಂಕ 15ನೇ ನವೆಂಬರ್ 2016 (1)

ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, ಉಲ್ಲೇಖ(1)ರ ಆದೇಶದಲ್ಲಿ 2016-17ನೇ ಶೈಕ್ಷಣಿಕ ಸಾಲಿನಲ್ಲಿ ಶ್ರೀಮತಿ Hita Claudia Raoರವರಿಗೆ ವಾರಕ್ಕೆ 08 ಗಂಟೆಯ ಬೋಧನ ಕಾರ್ಯವನ್ನು ಅತಿಥಿ ಉಪನ್ಯಾಸಕರಾಗಿ ಮಾನಸಗಂಗೋತ್ರಿಯಲ್ಲಿನ ಮನ:ಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಕಾರ್ಯನಿರ್ವಹಿಸುವಂತೆ ಆದೇಶ ನೀಡಲಾಗಿದ್ದು, ಇದರ ಮುಂದುವರಿಕೆಯಾಗಿ ಇವರಿಗೆ ಕೆಳಗೆ ವಿವರಿಸಿರುವಂತೆ ಬೋಧನ ಕಾರ್ಯವನ್ನು ನಿರ್ವಹಿಸಲು ಕೆಳಕಂಡ ಷರತ್ತುಗಳೊಂದಿಗೆ ಹಂಚಿಕೆ ಮಾಡಲಾಗಿದೆ.

| ವಿಷಯ | ಈಗಾಗಲೇ ವಾರಕ್ಕೆ ವಹಿಸಿರುವ ಬೋಧನಾ ಕಾರ್ಯ | ಮಾರ್ಪಡಿಸಿ ವಾರಕ್ಕೆ ವಹಿಸಿರುವ ಬೋಧನಾ ಕಾರ್ಯ | ಹಿಂದಿನ ಆದೇಶದಲ್ಲಿ ನೀಡಿದ್ದ ಸಂಭಾವನೆ | ಪ್ರಸ್ತುತ ನಿಗದಿಪಡಿಸಿರುವ ಒಟ್ಟು ಮಾಹೆಯಾನ ಸಂಭಾವನೆ |
|---|---|---|---|---|
| ಮನ:ಶಾಸ್ತ್ರ | 08 | 12 | 15000/- | 22500/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ಅಧ್ಯಯನ ವಿಭಾಗಾಧ್ಯಕ್ಷರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

ಷರತ್ತುಗಳು:

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

16/11/16

ಪು.ತಿ.ನೋ.

Scanned with CamScanner

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

## ಮುಚ್ಚಳಿಕೆ

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2016-17ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.

2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕಳಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ ಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದು ಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಸೂಚನೆ ನೀಡದೇ ರದ್ದುಪಡಿಸಲಾಗುವುದೆಂದು ತಿಳಿದಿರುತ್ತೇನೆ.

ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧನಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

ಆದೇಶದ ಮೇರೆಗೆ

ಉಪಕುಲಸಚಿವ

ಕುಲಸಚಿವರು

ಮೈಸೂರು ವಿಶ್ವವಿದ್ಯಾನಿಲಯ

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರುಗಳಿಗೆ - ಅಧ್ಯಕ್ಷರು, ಮನಃಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, ಇವರ ಮುಖಾಂತರ.
2. ಅಧ್ಯಕ್ಷರು, ಮನಃಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, - ಅತಿಥಿ ಉಪನ್ಯಾಸಕರಿಂದ ಮೇಲೆ ತಿಳಿಸಿರುವ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಬರೆಸಿಕೊಳ್ಳುವುದು ಹಾಗೂ 12 ಗಂಟೆ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳು ಬೇರೆ ಸರ್ಕಾರಿ/ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುವುದು ಕಂಡುಬಂದಲ್ಲಿ ತಮ್ಮ ವತಿಯಿಂದಲೇ ಅವರನ್ನು ಸೇವೆಯಿಂದ ಬಿಡುಗಡೆಗೊಳಿಸಿ ಈ ಕಛೇರಿಯ ಗಮನಕ್ಕೆ ತರುವುದು.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಸರ್ಕಾರಿ ಲೆಕ್ಕ ಪರಿಶೋಧಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಯವರು, ಮಾನಸಗಂಗೋತ್ರಿ, ಮೈಸೂರು.
7. ಉಪಕುಲಸಚಿವರು(ಸಾಮಾನ್ಯ)/ಸಹಾಯಕ ಕುಲಸಚಿವ/ಅಧೀಕ್ಷಕರು (ಸಿಬ್ಬಂದಿ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು.
8. ಕುಲಪತಿ/ಕುಲಸಚಿವ/ಹಣಕಾಸು ಅಧಿಕಾರಿ/ಕುಲಸಚಿವ(ಪ) ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಕಛೇರಿ ಪ್ರತಿ : E:\New files of ET7\Guest Faculty\ids-et7-192-2011-12.docx 15-Nov-16 1:03 PM

Scanned with CamScanner